# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1275

ಸದಸ್ಯರ ಹೆಸರು : ಶ್ರೀ ಐವನ್ ಡಿ'ಸೋಜಾ (ವಿಧಾನಸಭಾ ಕ್ಷೇತ್ರ)

ಉತ್ತರಿಸುವ ದಿನಾಂಕ : 13.03.2026

ಉತ್ತರಿಸುವ ಸಚಿವರು : ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಮೂರು ವರ್ಷಗಳಿಂದ ಕೊಂಕಣಿ ಅಕಾಡೆಮಿಯ ಕಟ್ಟಡವು ಅನುದಾನದ ಕೊರತೆಯಿಂದ ಪಾಳುಬಿದ್ದಿದ್ದು, ಈ ಬಗ್ಗೆ ಅನೇಕ ಬಾರಿ ದುರಸ್ಥಿಗೆ ಬೇಡಿಕೆ ನೀಡಿದ್ದರು. ಯಾವುದೇ ಕ್ರಮಕೈಗೊಳ್ಳದೇ ಇರಲು ಕಾರಣವೇನು: (ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಕಸಂಪಾ 110 ಕೆ.ಒ.ಎಲ್ ಆಕ 2019, ದಿನಾಂಕ:07.12.2019ರಲ್ಲಿ ಕೊಂಕಣಿ ಭವನದ ಕಟ್ಟಡ ಕಾಮಗಾರಿಗೆ ರೂ.300.00 ಲಕ್ಷಗಳನ್ನು ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದಿಂದ ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರಿಗೆ ಬಿಡುಗಡೆ ಮಾಡಲಾಗಿದೆ. ಸರ್ಕಾರದ ಆದೇಶ ಸಂಖ್ಯೆ: ಕಸಂಪಾ 47 ಕೆಓಎಲ್ ಆಕ 2021, ದಿ:02.12.2021ರಲ್ಲಿ ರೂ.300.00 ಲಕ್ಷಗಳ ಅಂದಾಜು ಪಟ್ಟಿಗೆ ಸೀಮಿತಗೊಳಿಸಿ ಆಡಳಿತಾತ್ಮಕ ಮಂಜೂರಾತಿ ನೀಡಿ ಆದೇಶಿಸಲಾಗಿರುತ್ತದೆ.<br><br>ಮುಂದುವರೆದು, ಕೊಂಕಣಿ ಭವನದ ಬಾಕಿ ಕಾಮಗಾರಿಗಳಿಗೆ ಅಂದಾಜು ವೆಚ್ಚ ಪಟ್ಟಿ ನೀಲಿನಕಾಶೆಯೊಂದಿಗೆ ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಕೋರಿ ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ ಇವರಿಗೆ ದಿ:06.12.2025ರಂದು ಪತ್ರ ಬರೆಯಲಾಗಿರುತ್ತದೆ. |
| (ಆ) | ಕೊಂಕಣಿ ಅಕಾಡೆಮಿಯು ಕೊಂಕಣಿ ಭಾಷಿಕರನ್ನು ರಾಜ್ಯದ ವಿವಿಧ ಕಡೆಗಳಲ್ಲಿ ಇರುವ ಬಗ್ಗೆ ಅಂಕಿ ಅಂಶಗಳನ್ನು ಸಂಗ್ರಹಿಸಲಾಗಿದೆಯೇ: (ವಿವರ ನೀಡುವುದು) | ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿ ವತಿಯಿಂದ ಕೊಂಕಣಿ ಭಾಷಿಕರ ಅಂಕಿ ಅಂಶಗಳನ್ನು ಸಂಗ್ರಹಿಸಿರುವುದಿಲ್ಲ. |
| ಇ) | ಕೊಂಕಣಿ ಭಾಷೆ ಪ್ರೋತ್ಸಾಹಿಸಲು ದೇಶ ವಿದೇಶಗಳಲ್ಲಿ ವಾಸಿಸುವ ಕೊಂಕಣಿ ಭಾಷಿಗರನ್ನು ಸಂಘಟಿಸಲು ಸರ್ಕಾರ ಯಾವುದಾದರು ಕಾರ್ಯಕ್ರಮ ಹಮ್ಮಿಕೊಂಡಿದೆಯೇ: (ವಿವರ ನೀಡುವುದು) | ಕೊಂಕಣಿ ಭಾಷೆಯನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಸ್ಥಾಪಿತವಾಗಿರುವ ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿಯು ಸಾಂಸ್ಕೃತಿಕ ಸಾಹಿತ್ಯಕ ಚಟುವಟಿಕೆಗಳನ್ನು ನಡೆಸಿಕೊಂಡು ಬರುತ್ತಿದೆ.<br><br>ಕೊಂಕಣಿ ಭಾಷೆ, ಸಂಸ್ಕೃತಿ ಮತ್ತು ಕಲೆಯನ್ನು ಪ್ರೋತ್ಸಾಹಿಸಲು, ವಿದೇಶದಲ್ಲಿ ಇರುವ ಕೊಂಕಣಿ ಭಾಷಿಗರನ್ನು ಸಂಘಟಿಸಲು ಯು.ಎ.ಇ ದೇಶದಲ್ಲಿ ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿಯು ಮಂಗಳೋರ್ ಕೊಂಕಣ್ಸ್ ಎಂಬ ಸಂಘಟನೆಯ ಜೊತೆಗೂಡಿ ವಿಶ್ವ ಕೊಂಕಣಿ ಸಂಭ್ರಮ ಹಮ್ಮಿಕೊಳ್ಳಲು ಕ್ರಮವಹಿಸಲಾಗುತ್ತಿದೆ. |
| ಈ) | ಕೊಂಕಣಿ ಭಾಷಿಕರು ವಿದೇಶಗಳಲ್ಲಿ ವಾಸವಾಗಿರುವುದರಿಂದ ಅಮೇರಿಕದಲ್ಲಿ 'ಅಕ್ಕ' ಮಾದರಿಯ ಕಾರ್ಯಕ್ರಮಗಳು ಆಯೋಜಿಸಲು ಕೊಂಕಣಿ ಭಾಷಿಗರನ್ನು ಒಟ್ಟುಗೂಡಿಸಲು ಯೋಜನೆ ಹಮ್ಮಿಕೊಳ್ಳಲಾಗಿದೆಯೇ? | |

ಸಂಖ್ಯೆ: ಕಸಂಪಾ 26 ಕೆಓಎಲ್ ಆಕ 2026

(ಶಿವರಾಜ ಎಸ್. ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು

ಕರ್ನಾಟಕ ಸರ್ಕಾರ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ
ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು-560002.
ದೂರವಾಣಿ-080-22213530/22241325 ಫ್ಯಾಕ್ಸ್ : 080-22214379 ಇ-ಮೇಲ್ : kanbhavblr@gmail.com ವೆಬ್ ಸೈಟ್ : https://kannadasiri.karnataka.gov.in

ಡಿಕೆಸಿ:25026/31/2025 ದಿನಾಂಕ:06.12.2025

ಜಿಲ್ಲಾಧಿಕಾರಿಗಳು
ದಕ್ಷಿಣ ಕನ್ನಡ ಜಿಲ್ಲೆ
ಮಂಗಳೂರು

ಮಾನ್ಯರೆ.

ವಿಷಯ: ಕೊಂಕಣಿ ಸಾಹಿತ್ಯ ಅಕಾಡೆಮಿಯ ಕೊಂಕಣಿ ಭವನ ಕಾಮಗಾರಿಗೆ ಹೆಚ್ಚುವರಿ ಅನುದಾನ ಬಿಡುಗಡೆ ಮಾಡುವ ಕುರಿತು.

ಉಲ್ಲೇಖ:
1. ಅಧ್ಯಕ್ಷರು, ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿ, ಮಂಗಳೂರು ಇವರ ಪತ್ರ ದಿನಾಂಕ:16.08.2025.
2. ಮಾನ್ಯ ಸಭಾಧ್ಯಕ್ಷರು, ಕರ್ನಾಟಕ ವಿಧಾನಸಭೆ ಇವರ ಪತ್ರ ದಿ:18.08.2025.
3. ಸರ್ಕಾರದ ಆದೇಶ ಸಂಖ್ಯೆ:ಕಸಂವಾ 47 ಕೆಓಎಲ್ ಆಕ 2021, ದಿ:02.12.2021.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1) ಮತ್ತು (2)ರ ಪತ್ರದಲ್ಲಿ ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿಯ ಕೊಂಕಣಿ ಭವನ ನಿರ್ಮಾಣ ಕಾಮಗಾರಿಗೆ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದಿಂದ ರೂ.300.00ಲಕ್ಷ ಅನುದಾನ ಬಿಡುಗಡೆ ಮಾಡಲಾಗಿದ್ದು, ಲೋಕೋಪಯೋಗಿ ಇಲಾಖೆ ಮಂಗಳೂರು ವಿಭಾಗ ಇವರಿಂದ ಸಲ್ಲಿಸಿದ ರೂ.300.00ಲಕ್ಷಗಳ ಅಂದಾಜು ಪಟ್ಟಿಪಟ್ಟಿಯಂತೆ ಬೇಸ್‌ಮೆಂಟ್ ಮಹಡಿ, ನೆಲಮಹಡಿ, ಮೊದಲನೇ ಮಹಡಿಯ ಸ್ಟ್ರಕ್ಚರಲ್ ಕಾಮಗಾರಿ ಹಾಗೂ ಲ್ಯಾಟರೈಟ್ ಗೋಡೆ ನಿರ್ಮಾಣ ಕಾಮಗಾರಿ ಹಾಗೂ ಪ್ಲಾಸ್ಟರಿಂಗ್ ಕೆಲಸ ಪೂರ್ಣಗೊಂಡಿದ್ದು, ಈ ಕಾಮಗಾರಿಗಳಿಗೆ ಒಟ್ಟು ರೂ.269.54ಲಕ್ಷಗಳನ್ನು ಪಾವತಿಸಲಾಗಿರುತ್ತದೆ. ಎಲೆಕ್ಟ್ರಿಕಲ್, ಪ್ಲಂಬಿಂಗ್, ಒಳಾಂಗಣ ವಿನ್ಯಾಸ,ಗ್ರಿಲ್ಸ್, ನೆಲಹಾಸು, ಕಿಟಕಿ ಬಾಗಿಲು, ಪೀಠೋಪಕರಣ, ಲಿಫ್ಟ್ ಪೈಂಟಿಂಗ್, ತಡೆಗೋಡೆ, ಕಾಂಪೌಂಡ್ ಗೋಡೆ ಇಂಟರ್ ಲಾಕ್ ಹಾಗೂ ಇತರೆ ಕಾಮಗಾರಿಗಳನ್ನು ಕೈಗೊಳ್ಳಲು ಉಳಿಕೆ ಅನುದಾನದಲ್ಲಿ ಸಾಧ್ಯವಾಗುವುದಿಲ್ಲ ಆದ್ದರಿಂದ ರೂ.300.00ಲಕ್ಷ ಹೆಚ್ಚುವರಿ ಅನುದಾನವನ್ನು ಸನ್ಮಾನ್ಯ ಮುಖ್ಯಮಂತ್ರಿಯವರ ನಿಧಿಯಿಂದ ಬಿಡುಗಡೆಗೊಳಿಸಬೇಕೆಂದು ಕೋರಿದ್ದಾರೆ.

ಸದರಿ ಮನವಿ ಮೇಲೆ ಸನ್ಮಾನ್ಯ ಮುಖ್ಯಮಂತ್ರಿಯವರು ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರು ಅಗತ್ಯ ಕ್ರಮಜರುಗಿಸುವುದು ಎಂದು ಸೂಚ್ಯಾದೇಶ ನೀಡಿರುತ್ತಾರೆ, (ಪ್ರತಿ ಲಗತ್ತಿಸಿದೆ).

ಈ ಮೇರೆಗೆ, ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿಯ ಕೊಂಕಣಿ ಭವನ ನಿರ್ಮಾಣಕ್ಕೆ ಈಗಾಗಲೇ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದಿಂದ ಬಿಡುಗಡೆ ಮಾಡಲಾಗಿರುವ ರೂ.300.00ಲಕ್ಷಗಳಿಗೆ ಹಣ ಬಳಕೆ ಪ್ರಮಾಣ ಪತ್ರ, 3ನೇ ಪಕ್ಷಾದಾರರಿಂದ ಮಾಡಿಸಿದ ತಪಾಸಣಾ ವರದಿ, ಕಟ್ಟಡ ಕಾಮಗಾರಿಯ ಛಾಯಾಚಿತ್ರಗಳು, ಈವರೆಗೆ ಕೈಗೊಂಡಿರುವ ಹಾಗೂ ಎರಡನೇ ಹಂತದಲ್ಲಿ ಕೈಗೊಳ್ಳಬೇಕಾಗಿರುವ ಕಾಮಗಾರಿಗಳ

ವಿವರ ಮತ್ತು ಕಾಮಗಾರಿಗಳು ಪುನರಾವರ್ತನೆ ಆಗದಿರುವ ಕುರಿತು (Non Duplicate Certificate), ಅಂದಾಜು ವೆಚ್ಚಪಟ್ಟಿ ಮತ್ತು ನೀಲಿ ನಕಾಶೆಯೊಂದಿಗೆ ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಕೋರಿದೆ.

ತಮ್ಮ ವಿಶ್ವಾಸಿ,

Digitally signed by
K M GAYITHRI
Date: [illegible] 17:[illegible]

ನಿರ್ದೇಶಕರು
ಕನ್ನಡ ಮತ್ತು ಸಂಸ್ಕೃತಿ ಇಲಾಖೆ
ಬೆಂಗಳೂರು

ಪ್ರತಿ:

1. ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರು ಜಿಲ್ಲಾಧಿಕಾರಿಗಳನ್ನು ಸಂಪರ್ಕಿಸಿ ಅಗತ್ಯ ದಾಖಲೆಗಳೊಂದಿಗೆ ಪ್ರಸ್ತಾವನೆ ಕಳುಹಿಸಲು ಅಗತ್ಯ ಕ್ರಮವಹಿಸುವಂತೆ ಸೂಚಿಸಿದೆ.
2. ಕಡತಕ್ಕೆ